ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

BENGALURU
CITY UNIVERSITY

Office of the Registrar, Central College Campus, Dr. B.R. Ambedkar Veedhi, Bengaluru – 560 001.
PhNo.080-22131385, E-mail: registrar@bcu.ac.in

ಸಂ.ಬಿಸಿಯು/ವಿವಿಪ/ಅಸಾಮಾನ್ಯ ಸಭೆ/81 /2024-25 ದಿನಾಂಕ: 01.07.2024

ಗೆ,
ವಿದ್ಯಾವಿಷಯಕ ಪರಿಷತ್ತಿನ ಸದಸ್ಯರು,
ಬೆಂಗಳೂರು ನಗರ ವಿಶ್ವವಿದ್ಯಾಲಯ,
ಬೆಂಗಳೂರು

ಮಾನ್ಯರೆ,

ವಿಷಯ: ದಿನಾಂಕ. 26.06.2024 ರಂದು ಜರುಗಿದ ವಿದ್ಯಾವಿಷಯಕ ಪರಿಷತ್ತಿನ ಅಸಾಮಾನ್ಯ ಸಭೆಯ ನಡವಳಿಗಳು.

****

ದಿನಾಂಕ 26.06.2024 ರಂದು ಬೋರ್ಡ್‌ರೂಮ್, ಜ್ಞಾನಜ್ಯೋತಿ ಸಭಾಂಗಣ, ಅರಮನೆ ರಸ್ತೆ, ಬೆಂಗಳೂರು-560001 ರಲ್ಲಿ ಜರುಗಿದ ವಿದ್ಯಾವಿಷಯಕ ಪರಿಷತ್ತಿನ ಅಸಾಮಾನ್ಯ ನಡವಳಿಗಳನ್ನು ಮಾನ್ಯ ಕುಲಪತಿಗಳು ಅನುಮೋದಿಸಿದಂತೆ, ಬೆಂಗಳೂರು ವಿಶ್ವವಿದ್ಯಾಲಯದ ಪರಿನಿಯಮಾವಳಿ 4.18 ರನ್ವಯ ಕಳುಹಿಸುತ್ತಿದ್ದೇನೆ.

ನಡವಳಿಗಳನ್ನು ರವಾನಿಸಿದ ದಿನಾಂಕದಿಂದ ಹದಿನಾಲ್ಕು ದಿನಗಳೊಳಗಾಗಿ ಸಭೆಯಲ್ಲಿ ಹಾಜರಿದ್ದ ಸದಸ್ಯರು, ನಡವಳಿಗಳ ಬಗ್ಗೆ ಯಾವುದೇ ಆಕ್ಷೇಪಣೆಯನ್ನು ಕಳುಹಿಸದಿದ್ದಲ್ಲಿ, ಮೇಲೆ ಹೇಳಿದ ಪರಿನಿಯಮಾವಳಿಗಳ ಅನುಸಾರ ಅವುಗಳನ್ನು ಸ್ಥಿರೀಕರಿಸಲಾಗಿದೆ ಎಂದು ಪರಿಗಣಿಸಲಾಗುವುದು.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ಕುಲಸಚಿವರು

ಅಡಕ: ಮೇಲಿನಂತೆ

ಪ್ರತಿಗಳು:

1. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು – 560 001.
2 ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ), ಕರ್ನಾಟಕ ಸರ್ಕಾರ, ಬೆಂಗಳೂರು-1
3. ಕುಲಪತಿಗಳು, ಕುಲಸಚಿವರು, ಕುಲಸಚಿವರು (ಮೌಲ್ಯಮಾಪನ), ವಿತ್ತಾಧಿಕಾರಿಗಳ ಆಪ್ತ ಕಾರ್ಯದರ್ಶಿಗಳಿಗೆ,
4. ಕಛೇರಿ ಪ್ರತಿ / ರಕ್ಷಣಾ ಕಡತ

ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

**BENGALURU
CITY UNIVERSITY**

Office of the Registrar, Central College Campus, Dr. B.R. Ambedkar Veedhi, Bengaluru – 560 001.
PhNo.080-22131385, E-mail: registrarbcu@gmail.com

ಸಂಖ್ಯೆ:ಬೆಂ.ನ.ವಿ/ವಿವಿಪ/ಅಸಾಮಾನ್ಯ/ 81 /2024–25 ದಿನಾಂಕ: 01.07.2024.

ದಿನಾಂಕ 26.06.2024 ರಂದು ಪೂರ್ವಾಹ್ನ 11.30 ಗಂಟೆಗೆ ಬೋರ್ಡ್‌ರೂಮ್, ಜ್ಞಾನಜ್ಯೋತಿ ಸಭಾಂಗಣ, ಅರಮನೆ ರಸ್ತೆ, ಬೆಂಗಳೂರು–560 001 ಇಲ್ಲಿ ಜರುಗಿದ ವಿದ್ಯಾವಿಷಯಕ ಪರಿಷತ್ತಿನ ಅಸಾಮಾನ್ಯ ಸಭೆಯ ನಡವಳಿಗಳು.

*ಸಭೆಯಲ್ಲಿ ಉಪಸ್ಥಿತರಿದ್ದ ಸದಸ್ಯರು:*

| | | |
|---|---|---|
| 1. | ಪ್ರೊ. ಲಿಂಗರಾಜ ಗಾಂಧಿ | ಸಭಾಧ್ಯಕ್ಷರು |
| 2. | ಶ್ರೀ ರಮೇಶ್ ನಾರಾಯಣ್ ರಾವ್ | ಸದಸ್ಯರು |
| 3. | ಡಾ. ಪ್ರೇಮ | ಸದಸ್ಯರು |
| 4. | ಪ್ರೊ. ಸುಮಯಾ ಫಾತಿಮಾ | ಸದಸ್ಯರು |
| 5. | ಡಾ. ಎಂ. ಆರ್. ಲಕ್ಷ್ಮೀನಾರಾಯಣ | ಸದಸ್ಯರು |
| 6. | ಡಾ. ಎಲಿಝಾಬತ್ ಜಾಸ್ಮಿನ್ | ಸದಸ್ಯರು |
| 7. | ಶ್ರೀಮತಿ. ಡಿ. ಆರ್ ಸುಧಾ | ಸದಸ್ಯರು |
| 8. | ಡಾ. ಮಹೇಶ್ ಕುಮಾರ್ ಕೆ. ಆರ್ | ಸದಸ್ಯರು |
| 9. | ಡಾ. ಎನ್. ಅರುಂಧತಿ | ಸದಸ್ಯರು |
| 10. | ಡಾ. ಎಸ್. ನಾಗರಾಜ್ | ಸದಸ್ಯರು |
| 11. | ಡಾ. ಕೆ ಶಿವಶಂಕರ | ಸದಸ್ಯರು |
| 12. | ಡಾ. ಪಿ.ಆರ್. ಚೇತನ | ಸದಸ್ಯರು |
| 13. | ಡಾ.ವಿ.ಆರ್.ದೇವರಾಜ್ | ಸದಸ್ಯರು |
| 14. | ಡಾ. ಮೇಧ ಇಟಗಿ ಹುಯಿಲ್‌ಗೋಳ್ | ಸದಸ್ಯರು |
| 15. | ಡಾ. ರಮೇಶ್ ಕುಡೇನೆಟ್ಟಿ | ಸದಸ್ಯರು |
| 16. | ಡಾ. ಎಸ್ ಹರಿಪ್ರಸಾದ್ | ಸದಸ್ಯರು |
| 17. | ಡಾ. ಜ್ಯೋತಿ ವೆಂಕಟೇಶ್ | ಸದಸ್ಯರು |
| 18. | ಡಾ. ಕೆ. ಆರ್. ಜಲಜಾ | ಸದಸ್ಯರು |
| 19. | ಶ್ರೀಮತಿ ವಿಜಯಲಕ್ಷ್ಮೀ ಎಂ.ವಿ<br>ವಿತ್ತಾಧಿಕಾರಿಗಳು | ಸದಸ್ಯರು |
| 20. | ಡಾ. ಆನಂದ ಕುಮಾರ್ ಸಿ. ಎಸ್<br>ಕುಲಸಚಿವರು (ಮೌಲ್ಯಮಾಪನ) | ಸದಸ್ಯರು |
| 21. | ಶ್ರೀ ಜವರೇಗೌಡ ಟಿ, ಕೆ.ಎ.ಎಸ್<br>ಕುಲಸಚಿವರು | ಸದಸ್ಯ<br>ಕಾರ್ಯದರ್ಶಿಗಳು |

ಕುಲಸಚಿವರು ಸಭಾಧ್ಯಕ್ಷರಾದ ಕುಲಪತಿಗಳಿಗೆ ಹಾಗೂ ಸಭೆಯಲ್ಲಿ ಉಪಸ್ಥಿತರಿದ್ದ ಎಲ್ಲ ಸದಸ್ಯರಿಗೆ ಸ್ವಾಗತವನ್ನು ಕೋರಿ, ಸಭೆಗೆ ಚಾಲನೆ ನೀಡಲು ಸಭಾಧ್ಯಕ್ಷರನ್ನು ವಿನಂತಿಸಿದರು.

ಮಾನ್ಯ ಕುಲಪತಿಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿ ಕೆಳಗಿನ ವಿವರಗಳನ್ನು ನೀಡಿದರು.

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಮೂರನೇ ವಾರ್ಷಿಕ ಘಟಿಕೋತ್ಸವವು ದಿನಾಂಕ 29.06.2024ರ ಶನಿವಾರ, ಬೆಳಿಗ್ಗೆ 11.30 ಗಂಟೆಗೆ ನಗರದ ವಿಶ್ವವಿದ್ಯಾನಿಲಯದ ಜ್ಞಾನಜ್ಯೋತಿ ಸಭಾಂಗಣದಲ್ಲಿ, ಜರುಗಲಿದೆ.

ಸನ್ಮಾನ್ಯ ಶ್ರೀ ಥಾವರ್ ಚಂದ್ ಗೆಹ್ಲೋಟ್, ಕರ್ನಾಟಕ ರಾಜ್ಯದ ಗೌರವಾನ್ವಿತ ರಾಜ್ಯಪಾಲರು ಹಾಗೂ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳು, ಘಟಿಕೋತ್ಸವದ ಅಧ್ಯಕ್ಷತೆ ವಹಿಸುವರು.

ಸನ್ಮಾನ್ಯ ಡಾ॥ ಎಂ. ಸಿ. ಸುಧಾಕರ, ಕರ್ನಾಟಕ ಸರ್ಕಾರದ ಗೌರವಾನ್ವಿತ ಉನ್ನತ ಶಿಕ್ಷಣ ಸಚಿವರು ಹಾಗೂ ವಿಶ್ವವಿದ್ಯಾನಿಲಯದ ಸಮ ಕುಲಾಧಿಪತಿಗಳು ಘಟಿಕೋತ್ಸವದಲ್ಲಿ ಉಪಸ್ಥಿತರಿರುವರು.

ಸನ್ಮಾನ್ಯ ಪ್ರೊ. ಟಿ. ಜಿ. ಸೀತಾರಾಮ್, ಅಧ್ಯಕರು, ಆಲ್ ಇಂಡಿಯಾ ಕೌನ್ಸಿಲ್ ಫಾರ್ ಟೆಕ್ನಿಕಲ್ ಎಜುಕೇಶನ್ (AICTE), ಬೆಂಗಳೂರು ಇವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಘಟಿಕೋತ್ಸವ ಭಾಷಣವನ್ನು ಮಾಡುವರು.

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಮೂರನೇ ಘಟಿಕೋತ್ಸವದಲ್ಲಿ ವಿವಿಧ ಕ್ಷೇತ್ರದಲ್ಲಿನ ಗಣನೀಯ ಸಾಧನೆ ಮಾಡಿರುವ ಇಬ್ಬರು ಗಣ್ಯರಿಗೆ ಗೌರವ ಡಾಕ್ಟರೇಟ್ ಪದವಿಗಳನ್ನು ನೀಡಲು ಮಾನ್ಯ ಕುಲಾಧಿಪತಿಗಳು ಅನುಮೋದನೆ ನೀಡಿರುತ್ತಾರೆ.

| | | |
|---|---|---|
| 1. ಶ್ರೀ ಎಂ. ಆರ್. ಜಯರಾಮ್ | – ಅಧ್ಯಕ್ಷರು, ಗೋಕುಲ ಶಿಕ್ಷಣ ದತ್ತಿ | ಶಿಕ್ಷಣ ಮತ್ತು ಸಮಾಜ ಸೇವೆ |
| 2. ಶ್ರೀ ಜಿ. ಆರ್. ವಿಶ್ವನಾಥ್ | – ಖ್ಯಾತ ಕ್ರಿಕೆಟ್ ಆಟಗಾರರು | ಕ್ರೀಡೆ –ಕ್ರಿಕೆಟ್ |

ರಾಜ್ಯ ಸರ್ಕಾರ ಜಾರಿಯಲ್ಲಿ ತಂದಿರುವ UUCMS (Unified University College Management System) ಪ್ರಕಾರ ಸ್ನಾತಕ ಹಾಗೂ ಏಕಾತ್ಮಕ (Stand Alone) ಕೋರ್ಸ್‌ಗಳ ಪ್ರವೇಶ ಪ್ರಕ್ರಿಯೆ ಹಾಗೂ ಪರೀಕ್ಷಾ ಚಟುವಟಿಕೆಗಳನ್ನು ಸಂಪೂರ್ಣವಾಗಿ ತಂತ್ರಾಂಶದಲ್ಲಿ ನಿರ್ವಹಿಸಿ ವಿದ್ಯಾರ್ಥಿಗಳಿಗೆ ಘಟಿಕೋತ್ಸವದಲ್ಲಿ ಪದವಿ ಪ್ರಧಾನ ಮಾಡುತ್ತಿರುವ ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ ಬಹುಶಃ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಪ್ರಥಮ ವಿಶ್ವವಿದ್ಯಾನಿಲಯವಾಗಿದೆ ಎಂದು ತಿಳಿಸಿ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ 3ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪಡೆಯಲು ಅರ್ಹರಾದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳ ವಿವರಗಳನ್ನು ಸಭೆಗೆ ತಿಳಿಸಿದರು.

ಈ ಘಟಿಕೋತ್ಸವದಲ್ಲಿ ಒಟ್ಟು 63 ವಿದ್ಯಾರ್ಥಿಗಳು ಪ್ರಥಮ ರ್‍ಯಾಂಕ್ ಪ್ರಮಾಣ ಪತ್ರಗಳನ್ನು, ಚಿನ್ನದ ಪದಕ ಮತ್ತು ನಗದು ಬಹುಮಾನವನ್ನು ಸ್ವೀಕರಿಸಲಿದ್ದಾರೆ. ಈ ರ್‍ಯಾಂಕ್ ವಿಜೇತರಲ್ಲಿ 40 ವಿದ್ಯಾರ್ಥಿಗಳು ಬೆಂಗಳೂರು ನಗರ ವಿಶ್ವವಿದ್ಯಾನಿಲಯದಿಂದ ಸ್ಥಾಪಿತ ಚಿನ್ನದ ಪದಕ ಮತ್ತು ನಗದು ಬಹುಮಾನಗಳನ್ನು ಸ್ವೀಕರಿಸಲಿದ್ದಾರೆ. ವಿವಿಧ ದಾನಿಗಳು ಸ್ಥಾಪಿಸಿರುವ ಒಟ್ಟು 15 ಚಿನ್ನದ ಪದಕಗಳನ್ನು ಸಹ ಸ್ನಾತಕ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಸ್ವೀಕರಿಸಲಿದ್ದಾರೆ.

ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಸ್ಥಾಪಿಸಿದ ಚಿನ್ನದ ಪದಕಗಳಲ್ಲಿ, 35 ಚಿನ್ನದ ಪದಕ ಮತ್ತು ನಗದು ಬಹುಮಾನಗಳನ್ನು ಸ್ನಾತಕೋತ್ತರ (Post-graduate) ವಿದ್ಯಾರ್ಥಿಗಳಿಗೆ ಹಾಗೂ 5 ಚಿನ್ನದ ಪದಕಗಳನ್ನು ಸ್ನಾತಕ (Undergraduate) ಬಿ.ಎ., ಬಿ.ಎಸ್ಸಿ., ಬಿ.ಕಾಂ., ಬಿ.ಬಿ.ಎ., ಬಿ.ಇಡಿ., ಕೋರ್ಸುಗಳಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನೀಡಲಾಗುವುದು.

ವಿಶ್ವವಿದ್ಯಾನಿಲಯ ಸ್ಥಾಪಿಸಿದ ಚಿನ್ನದ ಪದಕಗಳ ಜೊತೆಗೆ ವಿವಿಧ ದಾನಿಗಳು ಸ್ಥಾಪಿಸಿರುವ ಒಟ್ಟು 15 ಚಿನ್ನದ ಪದಕಗಳಲ್ಲಿ 13 ಚಿನ್ನದ ಪದಕಗಳನ್ನು ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಸ್ವೀಕರಿಸಲಿದ್ದಾರೆ ಎಂದು ಕುಲಪತಿಗಳು ತಿಳಿಸಿದರು.

ಮಾನ್ಯ ಸದಸ್ಯರು ಘಟಿಕೋತ್ಸವ ಸಮಾರಂಭದಲ್ಲಿ ಸಕ್ರೀಯವಾಗಿ ಭಾಗವಹಿಸಿ ಸಮಾರಂಭವನ್ನು ಯಶಸ್ವಿಗೊಳಿಸಬೇಕಾಗಿ ವಿನಂತಿಸಿದರು. ನಂತರ ಕಾರ್ಯ ಸೂಚಿಯನ್ನು ಮಂಡಿಸಲು ಕುಲಸಚಿವರಿಗೆ ಸೂಚಿಸಿದರು.

**ವಿಷಯ ಸಂಖ್ಯೆ: 01**

ವಿಷಯ: ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ತೃತೀಯ ವಾರ್ಷಿಕ ಘಟಿಕೋತ್ಸವದಲ್ಲಿ (2020–2023ನೇ ಸಾಲಿನ) ವಿವಿಧ ಸ್ನಾತಕ ಪದವಿಗಳನ್ನು ಮತ್ತು 2021–23ನೇ ಸಾಲಿನ ವಿವಿಧ ಸ್ನಾತಕೋತ್ತರ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಅರ್ಹತಾ ಪಟ್ಟಿಗಳನ್ನು ಅನುಮೋದಿಸುವ ಬಗ್ಗೆ.

***ಪರಾಮರ್ಶಕ ಟಿಪ್ಪಣಿ:***

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ತೃತೀಯ ವಾರ್ಷಿಕ ಘಟಿಕೋತ್ಸವ ದಿನಾಂಕ 29.06.2024 ರಂದು ನಡೆಯಲಿದೆ. ಈ ಘಟಿಕೋತ್ಸವದಲ್ಲಿ ವಿಶ್ವವಿದ್ಯಾನಿಲಯದ ವಿವಿಧ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಪದವಿ ಸ್ವೀಕರಿಸಲು ಅರ್ಹರಾದ ವಿದ್ಯಾರ್ಥಿಗಳ ಅರ್ಹತಾ ಪಟ್ಟಿಗಳನ್ನು ವಿಶ್ವವಿದ್ಯಾನಿಲಯ ಪರಿನಿಯಮಾವಳಿ ಅಧ್ಯಾಯ 15ರ ಪ್ರಕಾರ ಪರಿಗಣನೆಗಾಗಿ ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸಿದೆ.

ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ವಿದ್ಯಾರ್ಥಿಗಳು, ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳ ವಿದ್ಯಾರ್ಥಿಗಳು ಸೇರಿ ಸ್ನಾತಕೋತ್ತರ ಹಾಗೂ ಪಿಹೆಚ್‌ಡಿ ವ್ಯಾಸಂಗವನ್ನು ಪೂರ್ಣಗೊಳಿಸಿ ಆಯಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರುವ ಪದವಿ ಪಡೆಯಲು ಅರ್ಹರಾದ ವಿದ್ಯಾರ್ಥಿಗಳ ವಿವರ:

**ಪಿಹೆಚ್.ಡಿ. ಪದವೀದರರು**

| | |
|---|---|
| ಗಣಿತ ಶಾಸ್ತ್ರ | 04 |

**Post-Graduate Students 2021 – 23**

| Arts | Science | Commerce | Education | Autonomous | Total |
|---|---|---|---|---|---|
| 440 | 1121 | 2800 | 56 | 2007 | 6424 |

2020-23ರಲ್ಲಿ ಸ್ನಾತಕ ಪದವಿಗಳಿಗೆ ಪ್ರವೇಶ ಪಡೆದ ವಿವಿಧ ವಿಭಾಗಗಳ ವಿದ್ಯಾರ್ಥಿಗಳು, ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳ ವಿದ್ಯಾರ್ಥಿಗಳು ಸೇರಿ ಸ್ನಾತಕ ವಿದ್ಯಾರ್ಥಿಗಳು ಆಯಾ ಕೋರ್ಸುಗಳನ್ನು ಮುಗಿಸಿ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರುವ ಅರ್ಹರಾದ ವಿದ್ಯಾರ್ಥಿಗಳ ವಿವರ:

**Undergraduate Students 2020 – 23**

| Arts | Science | Commerce | Education | Autonomous | Total |
|---|---|---|---|---|---|
| 1807 | 4530 | 15462 | 1260 | 6425 | 29484 |

ಅದರಂತೆ ಸ್ನಾತಕೋತ್ತರ ಹಾಗೂ ಸ್ನಾತಕ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿ **ಪ್ರಥಮ ರ್‍ಯಾಂಕ್ ಮತ್ತು ಚಿನ್ನದ ಪದಕ ಪಡೆದ ವಿದ್ಯಾರ್ಥಿಗಳ** ಪಟ್ಟಿ ಕೆಳಗಿನಂತಿದೆ:

Post Graduate 2021-23 Abstract **Gold Medal / Rank** Faculty – wise

| Course | Male | | Female | | Total | |
|---|---|---|---|---|---|---|
| | Gold Medal | Rank | Gold Medal | Rank | Gold Medal | Rank |
| Arts | 2 | 2 | 12 | 10 | 14 | 12 |
| Commerce | 1 | 1 | 6 | 5 | 7 | 6 |
| Science | 7 | 4 | 15 | 12 | 22 | 16 |
| Education | - | - | 1 | 1 | 1 | 1 |
| Total | 10 | 7 | 34 | 28 | 44 | 35 |

Under Graduate 2020-23 Abstract **Gold Medal / Rank** Faculty – wise

| Course | Male | | Female | | Total | |
|---|---|---|---|---|---|---|
| | Gold Medal | Rank | Gold Medal | Rank | Gold Medal | Rank |
| Arts | 1 | 6 | - | 2 | 1 | 8 |
| Commerce | - | 2 | 6 | 9 | 6 | 11 |
| Science | 1 | 1 | - | 6 | 1 | 7 |
| Education | - | - | 1 | 2 | 1 | 2 |
| Total | 2 | 9 | 7 | 19 | 9 | 28 |

ಮೇಲೆ ತಿಳಿಸಿದ ಅಭ್ಯರ್ಥಿಗಳ ಅರ್ಹತಾ ಪಟ್ಟಿಗಳನ್ನು ಹಾಗೂ ಪ್ರಥಮ ರ್‍ಯಾಂಕ್ ಮತ್ತು ಚಿನ್ನದ ಪದಕ ಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು ವಿದ್ಯಾವಿಷಯಕ ಪರಿಷತ್ತಿನ ಸಭೆಯ ಅನುಮೋದನೆಗಾಗಿ ಮಂಡಿಸಿದೆ.

**ವಿದ್ಯಾವಿಷಯಕ ಪರಿಷತ್ ತೀರ್ಮಾನ:**

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾಕೋತ್ತರ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿ ವಿವಿಧ ಪದವಿಗಳನ್ನು ಸ್ವೀಕರಿಸಲು ಅರ್ಹರಾದ ಅಭ್ಯರ್ಥಿಗಳ ಪಟ್ಟಿಗೆ ಅನುಮೋದನೆ ನೀಡಿ ವಿಶ್ವವಿದ್ಯಾನಿಲಯದ ಮೂರನೇ ಘಟಿಕೋತ್ಸವದಲ್ಲಿ ಪದವಿ ಪ್ರಧಾನ ಮಾಡಲು ಸಭೆ ಸರ್ವಾನುಮತದಿಂದ ಶಿಫಾರಸ್ಸು ಮಾಡಲು ತೀರ್ಮಾನಿಸಿತು.

ಮಾನ್ಯ ಕುಲಾಧಿಪತಿಗಳು ಅನುಮೋದಿಸಿದ ಕೆಳಗೆ ನಮೂದಿಸಿದ ಗಣ್ಯರಿಗೆ ವಿಶ್ವವಿದ್ಯಾನಿಲಯದಿಂದ ಗೌರವ ಡಾಕ್ಟರೇಟ್ ಪದವಿ ನೀಡಲು ಸಭೆ ಸರ್ವಾನುಮತದಿಂದ ಅನುಮೋದನೆ ನೀಡಿತು.

1. ಶ್ರೀ ಎಂ. ಆರ್. ಜಯರಾಮ್ – ಅಧ್ಯಕ್ಷರು, ಗೋಕುಲ ಶಿಕ್ಷಣ ದತ್ತಿ — ಶಿಕ್ಷಣ ಮತ್ತು ಸಮಾಜ ಸೇವೆ
2. ಶ್ರೀ ಜಿ. ಆರ್. ವಿಶ್ವನಾಥ್ – ಖ್ಯಾತ ಕ್ರಿಕೆಟ್ ಆಟಗಾರರು — ಕ್ರೀಡೆ –ಕ್ರಿಕೆಟ್

ವಿವಿಧ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿದ ಗಣ್ಯ ವ್ಯಕ್ತಿಗಳಿಗೆ ವಿಶ್ವವಿದ್ಯಾನಿಲಯದ ಮೂರನೇ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಪದವಿ ಪ್ರಧಾನ ಮಾಡಲು ಅನುಮೋದನೆ ನೀಡಿರುವ ಗೌರವಾನ್ವಿತ ಕುಲಾಧಿಪತಿಗಳಿಗೆ ಗೌರವ ಪೂರ್ವಕ ಧನ್ಯವಾದಗಳನ್ನು ಅರ್ಪಿಸಲು ಸಭೆ ತೀರ್ಮಾನಿಸಿತು.

ಕುಲಸಚಿವರಿಂದ ವಂದನಾರ್ಪಣೆ ಹಾಗೂ ರಾಷ್ಟ್ರಗೀತೆಯೊಂದಿಗೆ ಸಭೆ ಮುಕ್ತಾಯವಾಯಿತು.

| | |
|---|---|
| ಸಹಿ/– | ಸಹಿ/– |
| ಕುಲಸಚಿವರು | ಕುಲಪತಿಗಳು |
| ಸದಸ್ಯಕಾರ್ಯದರ್ಶಿಗಳು | ಸಭಾಧ್ಯಕ್ಷರು |

ಕುಲಸಚಿವರು
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಬೆಂಗಳೂರು